ಕನ್ನಡ ಚಿತ್ರಗಳಿಗೆ ಸಹಾಯ ಧನ

844 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಕಾನೂನು ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕನ್ನಡ ಚಿತ್ರಗಳಿಗೆ ಸಹಾಯ ಧನವನ್ನು ಎಂದಿನಿಂದ ನೀಡಲಾಗುತ್ತಿದೆ?

ಆ) ಕನ್ನಡ ಚಿತ್ರಗಳಿಗೆ ಸಹಾಯ ಧನ ಕೋರಿ ಇದುವರೆಗೆ ಎಷ್ಟು ಮನವಿಗಳು ಬಂದಿವೆ?

ಇ) ವಾರ್ತಾ ಇಲಾಖೆಯನ್ನು ನವೀಕರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ಸಿ. ನಾಣಯ್ಯ (ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಕನ್ನಡ ಚಿತ್ರಗಳಿಗೆ 1966-67ನೇ ಸಾಲಿನಿಂದ ಸಹಾಯಧನ ನೀಡಲಾಗುತ್ತಿದೆ.

ಆ) 1.4.89 ರಿಂದ 31.3.98ರ ವರೆಗೆ 612 ಅರ್ಜಿಗಳು ಬಂದಿರುತ್ತದೆ.

ಇ) ವಾರ್ತಾ ಮತ್ತು ಪ್ರಚಾರ ಇಲಾಖೆಯನ್ನು ನವೀಕರಣಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ಗಣಕೀಕರಣ :

10 ಗಣಕ ಯಂತ್ರಗಳನ್ನು ಸ್ಥಾಪಿಸಲಾಗಿದೆ. ಸರ್ಕಾರದ ಅಭಿವೃದ್ಧಿ ಕಾರ್ಯಗಳು ಹಾಗೂ ವಿವಿಧ ಕ್ಷೇತ್ರಗಳ ವಿಷಯಗಳನ್ನೊಳಗೊಂಡ ಮಾಹಿತಿಯನ್ನು ಸಂಗ್ರಹಿಸಿಡಲಾಗುತ್ತಿದೆ.

2. ಕನ್ನಡ ವಾರ್ತಾ ಜಾಲ :

ಪ್ರಥಮ ಹಂತವಾಗಿ ರಾಜ್ಯದಲ್ಲಿ 12 ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಕನ್ನಡ ಸುದ್ದಿ ಮಾಧ್ಯಮಗಳ ಸ್ವೀಕೃತಿ ಘಟಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ.

3. ವಿಡಿಯೋ ಕ್ಯಾಮರಾಗಳ ಘಟಕಗಳು :

ಧಾರವಾಡ, ಮಂಗಳೂರು ಹಾಗೂ ಗುಲ್ಬರ್ಗಾ ಜಿಲ್ಲೆಗಳಲ್ಲಿ ಹೆಚ್ಚುವರಿ ವಿಡಿಯೋ ಘಟಕಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿನ ಲೋಕೋಪಯೋಗಿ ಇಲಾಖೆಯ ರಸ್ತೆಗಳ ರಿಪೇರಿ

846 - ಶ್ರೀ ವಸಂತ ವಿ. ಸಾಲಿಯಾನ (ಕಾಪು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಲೋಕೋಪಯೋಗಿ ಇಲಾಖಾ ರಸ್ತೆಗಳನ್ನು ರಿಪೇರಿ ಮಾಡಿ, ನಿರ್ವಹಿಸಿಕೊಂಡು ಬರಲು 1995-96, 1996-97 ಹಾಗೂ 1997-98ನೇ ಸಾಲಿಗೆ ಬಿಡುಗಡೆ ಮಾಡಿರುವ ಹಣವೆಷ್ಟು?

ಆ) ಬಿಡುಗಡೆ ಮಾಡಿದ ಹಣದಲ್ಲಿ ಖರ್ಚು ಮಾಡಿದ ಹಣವೆಷ್ಟು? ಮತ್ತು ಎಷ್ಟು ರಸ್ತೆಗಳನ್ನು ಸುಸ್ಥಿತಿಯಲ್ಲಿಡಲಾಗಿದೆ?